## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 31/12/2019

# ಟರ್ಫ್ ಕ್ಲಬ್ ಬಾಡಿಗೆ ವಸೂಲಿಗೆ ತೀರ್ಮಾನ

ಸಂ.ಕ ಸಮಾಚಾರ ಬೆಂಗಳೂರು

ಬೆಂಗಳೂರು ಟರ್ಫ್ ಕ್ಲಬ್‌ನಿಂದ ಸರ್ಕಾರಕ್ಕೆ ಬರಬೇಕಾಗಿರುವ 37.46 ಕೋಟಿ ರೂ. ಬಾಡಿಗೆಯನ್ನು ವಸೂಲಿ ಮಾಡಲು ಸರ್ಕಾರ ತೀರ್ಮಾನಿಸಿದೆ.

ಈ ಕುರಿತು ಸಚಿವ ಸಂಪುಟದಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದ್ದು, ಟರ್ಫ್ ಕ್ಲಬ್‌ಗೆ ನೀಡಲಾಗಿರುವ ಗುತ್ತಿಗೆ ಅವಧಿ 2009ಕ್ಕೆ ಮುಕ್ತಾಯವಾಗಿದೆ. ಈ ಹಿನ್ನೆಲೆಯಲ್ಲಿ ಟರ್ಫ್ ಕ್ಲಬ್ ಸ್ಥಳಾಂತರ ಮಾಡಲು ತೀರ್ಮಾನಿಸಲಾಗಿತ್ತು. ಆದರೆ ಟರ್ಫ್‌ಕ್ಲಬ್ ನ್ಯಾಯಾಲಯದ ಮೆಟ್ಟಿಲು ಹತ್ತಿದೆ. ಈ ಸಂದರ್ಭದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ನ್ಯಾಯಾಲಯ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಅಡ್ವೋಕೇಟ್ ಜನರಲ್ ಅವರ ಸಲಹೆ ಮೇರೆಗೆ ಬಾಕಿ ಬಾಡಿಗೆಯನ್ನು ವಸೂಲಿ ಮಾಡಲು ತೀರ್ಮಾನಿಸಲಾಗಿದೆ. ನ್ಯಾಯಾಲಯದ ತೀರ್ಮಾನ ನೋಡಿಕೊಂಡು ಮುಂದೆ ಟರ್ಫ್‌ಕ್ಲಬ್‌ಗೆ ಗುತ್ತಿಗೆ ಅವಧಿ ಯನ್ನು ಮುಂದುವರೆಸಬೇಕೋ ಅಥವಾ ಬೇಡವೋ ಎಂಬುದನ್ನು ತೀರ್ಮಾನಿಸಲಾಗುತ್ತದೆ. ಸದ್ಯಕ್ಕೆ ಬಾಡಿಗೆ ವಸೂಲಿಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

### 30 ವರ್ಷ ನವೀಕರಣ

ಮೈಸೂರು ಟರ್ಫ್ ಕ್ಲಬ್‌ಗೆ ಮುಂದಿನ 30 ವರ್ಷ ಗುತ್ತಿಗೆ ಅವಧಿಯನ್ನು ನವೀಕರಣ ಮಾಡಲು ತೀರ್ಮಾನಿಸಲಾಗಿದೆ. ಎಂದಿನಂತೆ ಟರ್ಫ್ ಕ್ಲಬ್‌ನ ಆದಾಯದ ಶೇ. 2ರಷ್ಟು ಬಾಡಿಗೆ ನೀಡುವಂತೆ ಕರಾರು ಮಾಡಿಕೊಳ್ಳಲಾಗುತ್ತಿದೆ.